# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ರೇಣುಕಾ, ಹಿಂದಿನ ಮಾಜಿ ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ರವರ ಪತ್ರ ಸಂಖ್ಯೆ:ಪರಿಷತ್/ಸಿಆರ್/20/2018-19, ದಿನಾಂಕ:13-12-2018.
3. ಸರ್ಕಾರದ ಇದೇ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ:30.01.2019.
4. ಶ್ರೀಮತಿ ರೇಣುಕಾ, ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯತಿ ರವರ ಲಿಖಿತ ಸಮಜಾಯಿಷಿ ರವರ ದಿನಾಂಕ:14-02-2019.
5. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 796 ಗ್ರಾಪಂಅ 2018, ದಿನಾಂಕ:09-05-2019.
6. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ಪತ್ರ ಸಂ. ಪ್ರಾಆಕ/ಅಭಿವೃದ್ಧಿ/ಸಿಆರ್/31/2018-19, ದಿನಾಂಕ:06.11.2019.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43-ಎ ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವತನೆ, ಅಧಿಕಾರ ಮತ್ತು ಹಣ ದುರುಪಯೋಗಪಡಿಸಿಕೊಂಡ ಆರೋಪಗಳಿಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ರವರ ಪ್ರಸ್ತಾವನೆಯಲ್ಲಿ ಶ್ರೀಮತಿ ರೇಣುಕಾ, ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯತಿ ದಾಸನಪುರ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರ ಪತಿಯಾದ ಶ್ರೀ ಎಸ್ಎನ್.ರವೀಂದ್ರರವರು ಮಹಾಲಕ್ಷ್ಮಿ ಕನ್‌ಸ್ಟ್ರಕ್ಷನ್ಸ್ ವರ್ಕ್ಸ್ ಎಂಬ ಗುತ್ತಿಗೆದಾರರಾಗಿದ್ದು, ಸೊಂಡೇಕೊಪ್ಪ ಗ್ರಾಮ ಪಂಚಾಯತಿಯ 2017-18ನೇ ಸಾಲಿನ 14ನೇ ಹಣಕಾಸು ಯೋಜನೆ ಹಾಗೂ ವರ್ಗ-1ರಲ್ಲಿ 10.82 ಲಕ್ಷ ರೂ.ಗಳ 9 ಕಾಮಗಾರಿಗಳನ್ನು ಅನುಷ್ಠಾನಗೊಳಿಸಿರುತ್ತಾರೆ. ಇದರಿಂದ ಶ್ರೀಮತಿ ರೇಣುಕಾರವರು ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವ ಸಂಬಂಧ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 12(ಹೆಚ್) ರನ್ವಯ ಕ್ರಮ ಜರುಗಿಸಲು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ರವರ ಪ್ರಸ್ತಾವನೆಯಂತೆ ಶ್ರೀಮತಿ ರೇಣುಕಾ, ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯತಿ ದಾಸನಪುರ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿದ್ದು, ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ. ಲಿಖಿತ ಸಮಜಾಯಿಷಿಯಲ್ಲಿ ನನ್ನ ಪತಿಯವರು ಅನುಷ್ಠಾನಗೊಳಿಸಿರುವ ಕಾಮಗಾರಿಗಳಿಂದ ಯಾವುದೇ ಆರ್ಥಿಕ ನಷ್ಟ ಸರ್ಕಾರಕ್ಕೆ ಆಗಲಿ ಅಥವಾ ಗ್ರಾಮ ಪಂಚಾಯತಿಗಾಗಲಿ ಉಂಟಾಗಿರುವುದಿಲ್ಲ, ಕಾಮಗಾರಿಗಳ ಅನುಷ್ಠಾನ ಮಾಡುವಾಗ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿ ಅಧಿಕಾರಿಗಳು, ಅಧ್ಯಕ್ಷರು ಸಹ ಹಣ ಬಿಡುಗಡೆ ಮಾಡುವ ಮೊದಲು ಪೂರ್ಣವಾಗಿ ಪರಿಶೀಲಿಸಿ ನಂತರ ಹಣ ಪಾವತಿ ಮಾಡಿರುತ್ತಾರೆ. ಇದರಿಂದ ನನ್ನ ಪತಿಯವರು ಕಾನೂನುಬಾಹಿರವಾಗಿ ಗುತ್ತಿಗೆ ಪಡೆದು ಹಣ ದುರುಪಯೋಗ ಮಾಡಿಕೊಂಡಿಲ್ಲವೆಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಂತೆ ಶ್ರೀಮತಿ ರೇಣುಕಾ, ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯಿತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ವಿಚಾರಣೆ ನಡೆಸಲು ಮೇಲೆ ಓದಲಾದ ಕ್ರಮ ಸಂಖ್ಯೆ (5) ರಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ರವರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಶ್ರೀಮತಿ ರೇಣುಕಾ, ಸದಸ್ಯರು, ಸೊಂಡೇಕೊಪ್ಪ ಗ್ರಾ.ಪಂ. ದಾಸನಪುರ ಹೋಬಳಿ, ಬೆಂಗಳೂರು ಉತ್ತರ ತಾ. ಬೆಂಗಳೂರು ನಗರ ಜಿಲ್ಲೆ ರವರ ಪತಿಯಾದ ಶ್ರೀ ಎಸ್‌ಎನ್.ರವೀಂದ್ರರವರು ಮಹಾಲಕ್ಷ್ಮಿ ಕನ್‌ಸ್ಟ್ರಕ್ಷನ್ಸ್ ವರ್ಕ್ಸ್ ಎಂಬ ಗುತ್ತಿಗೆದಾರರಾಗಿದ್ದು, ಸೊಂಡೇಕೊಪ್ಪ ಗ್ರಾಮ ಪಂಚಾಯತಿಯ 2017-18ನೇ ಸಾಲಿನ 14ನೇ ಹಣಕಾಸು ಯೋಜನೆ ಹಾಗೂ ವರ್ಗ-1ರಲ್ಲಿ 10.82 ಲಕ್ಷ ರೂ.ಗಳ 9 ಕಾಮಗಾರಿಗಳನ್ನು ಅನುಷ್ಠಾನಗೊಳಿಸಿರುತ್ತಾರೆ. ಇದರಿಂದ ಶ್ರೀಮತಿ ರೇಣುಕಾರವರು ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವ ಸಂಬಂಧ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಕುರಿತು ದಿ:09-05-2019, 02-02-2019ರ ಸರ್ಕಾರಿ ಆದೇಶದಂತೆ ವಿಚಾರಣೆ ಮಾಡಿ ವಿಚಾರಣಾ ವರದಿಯನ್ನು ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿರುತ್ತಾರೆ.

ವಿಚಾರಣಾ ವರದಿಯಲ್ಲಿ ಶ್ರೀಮತಿ ರೇಣುಕಾ, ಸದಸ್ಯರು, ಸೊಂಡೇಕೊಪ್ಪ ಗ್ರಾ.ಪಂ. ದಾಸನಪುರ ಹೋಬಳಿ, ಬೆಂಗಳೂರು ಉತ್ತರ ತಾ. ಬೆಂಗಳೂರು ನಗರ ಜಿಲ್ಲೆ ರವರ ಪತಿಯಾದ ಶ್ರೀ ಎಸ್.ಎನ್. ರವೀಂದ್ರರವರು ಮಹಾಲಕ್ಷ್ಮಿ ಕನ್‌ಷ್ಟ್ರಕ್ಷನ್ಸ್ ವರ್ಕ್ಸ್ ಎಂಬ ಗುತ್ತಿಗೆದಾರರಾಗಿದ್ದು, ಹಣಕಾಸು ವರ್ಷ 2017-18ನೇ ಸಾಲಿಗೆ ಗ್ರಾಮ ಪಂಚಾಯತಿಯಿಂದ ಅನುಮೋದನೆಯಾದ ವರ್ಗ-1 ಮತ್ತು 14ನೇ ಹಣಕಾಸು ಯೋಜನೆಯಲ್ಲಿ 10.82 ಲಕ್ಷ ರೂ.ಗಳ 9 ಕಾಮಗಾರಿಗಳನ್ನು ಅನುಷ್ಠಾನಗೊಳಿಸಿರುವ ಸಂಬಂಧ ಶ್ರೀ ಮುನಿಬೈರಪ್ಪ ಮತ್ತು ಇತರರು ಸಲ್ಲಿಸಿರುವ ದೂರಿನ ಸಂಬಂಧ ಶ್ರೀಮತಿ ರೇಣುಕಾರವರಿಗೆ ನೋಟೀಸ್ ನೀಡಿ ದಿನಾಂಕ:08-07-2019, 26-07-2019 ಹೇಳಿಕೆಯನ್ನು ಪಡೆಯಲಾಗಿರುತ್ತದೆ ಹಾಗೂ ಈ ಬಗ್ಗೆ ಸದರಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರ ಹೇಳಿಕೆಯನ್ನು ಸಹ ಪಡೆಯಲಾಗಿರುತ್ತದೆ.

ಎಲ್ಲಾ ಅಂಶಗಳು ಮತ್ತು ದಾಖಲೆಗಳನ್ನು ಪರಿಶೀಲಿಸಿದಾಗ ಶ್ರೀಮತಿ ರೇಣುಕಾ, ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯತಿ ದಾಸನಪುರ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ರವರ ಪತಿಯಾದ ಶ್ರೀ ಎಸ್.ಎನ್.ರವೀಂದ್ರರವರು ಮಹಾಲಕ್ಷ್ಮಿ ಕನ್‌ಸ್ಟ್ರಕ್ಷನ್ಸ್ ವರ್ಕ್ಸ್ ಎಂಬ ಗುತ್ತಿಗೆದಾರರಾಗಿದ್ದು ಹಣಕಾಸು ವರ್ಷ 2017-18ನೇ ಸಾಲಿಗೆ ಗ್ರಾಮ ಪಂಚಾಯತಿಯಿಂದ ಅನುಮೋದನೆಯಾದ ವರ್ಗ-1 ಮತ್ತು 14ನೇ ಹಣಕಾಸು ಯೋಜನೆಯಲ್ಲಿ 10.82 ಲಕ್ಷ ರೂ.ಗಳ 9 ಕಾಮಗಾರಿಗಳನ್ನು ಅನುಷ್ಠಾನಗೊಳಿಸಿರುವುದು ದೃಢಪಟ್ಟಿರುತ್ತದೆ ಹಾಗೂ ಶ್ರೀ ಮಹಾಲಕ್ಷ್ಮಿ ಕನ್‌ಸ್ಟ್ರಕ್ಷನ್ ವರ್ಕ್ಸ್ ಎಂಬ ಹೆಸರಿಗೆ ಬಿಲ್ ಮೊತ್ತ ಪಾವತಿಸಿರುವುದು ದಾಖಲೆಗಳಿಂದ ದೃಢಪಟ್ಟಿರುತ್ತದೆ. ಆದಕಾರಣ, ಶ್ರೀಮತಿ ರೇಣುಕಾ, ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯತಿ ರವರು ಸರ್ಕಾರಿ ನಿಯಮಗಳನ್ನು ಉಲ್ಲಂಘಿಸಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) (V) ರಡಿ ಹಾಗೂ 12(ಹೆಚ್) ರಡಿ ಇವರ ಸದಸ್ಯತ್ವವನ್ನು ರದ್ದುಪಡಿಸುವಂತೆ ಕ್ರಮ ಜರುಗಿಸಬಹುದಾಗಿರುತ್ತದೆ ಎಂದು ವಿಚಾರಣಾ ವರದಿಯಲ್ಲಿ ತಿಳಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ವಿಚಾರಣಾ ವರದಿಯನ್ವಯ ಶ್ರೀಮತಿ ರೇಣುಕಾ ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರು ಸರ್ಕಾರಿ ನಿಯಮಗಳನ್ನು ಉಲ್ಲಂಘಿಸಿರುವುದರಿಂದ ಪ್ರಸ್ತುತ ಮಾಜಿ ಸದಸ್ಯರಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರಡಿ ಸದರಿ ಅಧಿನಿಯಮದ ಪ್ರಕರಣ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಲು ನಿರ್ಣಯಿಸಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1004/ಗ್ರಾಪಂಅ/2019**
**ಬೆಂಗಳೂರು, ದಿನಾಂಕ:23-08-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ರೇಣುಕಾ, ಹಿಂದಿನ ಸದಸ್ಯರು, ಸೊಂಡೇಕೊಪ್ಪ ಗ್ರಾಮ ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ ಇವರು ಸರ್ಕಾರಿ ನಿಯಮಗಳನ್ನು

ಉಲ್ಲಂಘಿಸಿರುವುದರಿಂದ ಪ್ರಸ್ತುತ ಮಾಜಿ ಸದಸ್ಯರಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(**vi**) ರಡಿ ಸದರಿ ಅಧಿನಿಯಮದ ಪ್ರಕರಣ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

23/8/21
**(ಚೇತನ ಎಂ.)**
ಸರ್ಕಾರದ ಅಧೀನ ಕಾರ್ಯದರ್ಶಿ,(ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
23/8/21

**ಗೆ:**

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹೆಚ್. ರಸ್ತೆ, ಬೆಂಗಳೂರು.
2) ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಗಾಂಧಿನಗರ, ಬೆಂಗಳೂರು.
3) ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
6) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸೊಂಡೇಕೊಪ್ಪ ಗ್ರಾಮ ಪಂಚಾಯತಿ, ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ.
7) ಸಂಬಂಧಿಸಿದವರಿಗೆ (ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ರವರ ಮುಖಾಂತರ)
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.
9) ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.